<u>ಅಸಲು ದಾವಾ ಸಂಖ್ಯೆ:- **19/2016**</u>                    <u>ಡಿ.ಡಬ್ಲ್ಯೂ:-</u> **2**

ದಿನಾಂಕಃ **03-11-2025** ರಂದು ಸಾಕ್ಷಿಯು ನ್ಯಾಯಾಲಯಕ್ಕೆ ಹಾಜರಾಗಿದ್ದು ಪ್ರಮಾಣ ವಚನ ಬೋಧಿಸಲಾಯಿತು.

<u>ಮುಂದುವರೆದ ಪಾಟೀ ಸವಾಲು:- ವಾದಿ ಪರ ವಕೀಲರಿಂದ:-</u>

ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರದಲ್ಲಿ ಗಿರಿಯಪ್ಪನ ಮಕ್ಕಳಾದ ರುದ್ರಪ್ಪ, ಹಾಲಪ್ಪ ಮತ್ತು ನಾಗೇಂದ್ರಪ್ಪ ರವರು ದಿಃ 09-10-1967 ರ ನೋಂದಾಯಿತ ವಿಭಾಗ ಪತ್ರವನ್ನು ಮಾಡಿಕೊಂಡು ಕುಟುಂಬದ ಆಸ್ತಿಗಳನ್ನು ವಿಭಾಗ ಮಾಡಿಕೊಂಡಿದ್ದಾರೆ ಎಂದು ನಮೂದಾಗಿದೆ ಎಂದರೆ ಸರಿ. ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರದಲ್ಲಿ ರುದ್ರಪ್ಪ, ಹಾಲಪ್ಪ ಮತ್ತು ನಾಗೇಂದ್ರಪ್ಪರವರ ಒಟ್ಟು ಕುಟುಂಬದ ಅಸ್ತಿತ್ವ ಇಲ್ಲ ಎಂದು ನಮೂದಾಗಿದೆ ಎಂದರೆ ಸರಿ. ಮೇಲ್ಕಂಡ ವಿಚಾರವನ್ನು ನೋಂದಾಯಿತ ವಿಭಾಗ ಪತ್ರದ ಆಧಾರದ ಮೇಲೆ ಹೇಳುತ್ತಿದ್ದೇನೆ. ಸದರಿ ನೋಂದಾಯಿತ ವಿಭಾಗ ಪತ್ರವನ್ನು ನಾನು ನೋಡಿದ್ದೇನೆ. ಸದರಿ ನೋಂದಾಯಿತ ವಿಭಾಗ ಪತ್ರವನ್ನು ಹಾಜರುಪಡಿಸಲು ನನಗೆ ಯಾವುದೇ ತೊಂದರೆ ಇರುವುದಿಲ್ಲ. 1 ನೇ ಪ್ರತಿವಾದಿಗೆ ಗೋಪಗೊಂಡನಹಳ್ಳಿ ಗ್ರಾಮದಲ್ಲಿ ಒಂದು ಕೆಂಪು ಹಂಚಿನ ಮನೆ ಇದೆ ಎಂಬ ಬಗ್ಗೆ ನನಗೆ ಗೊತ್ತಿಲ್ಲ. 4 ನೇ ಪ್ರತಿವಾದಿ ಗೊತ್ತು. 4 ನೇ ಪ್ರತಿವಾದಿಯು 1 ನೇ ಪ್ರತಿವಾದಿಗೆ ಸೇರಿದ ಕೆಂಪು ಹಂಚಿನ ಮನೆಯಲ್ಲಿ ದವಸ ಧಾನ್ಯಗಳನ್ನು ಇಟ್ಟುಕೊಂಡಿದ್ದಾರೆ ಎಂದರೆ ನನಗೆ ಗೊತ್ತಿಲ್ಲ. ನಾನು 4 ನೇ ಪ್ರತಿವಾದಿಯ ಜೊತೆ ಶಾಮೀಲಾಗಿ ವಾದಿಗೆ ತೊಂದರೆ ಕೊಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನೋಂದಾಯಿತ ವಿಭಾಗ ಪತ್ರ ಆದ ನಂತರ 1 ನೇ ಪ್ರತಿವಾದಿಯ ಗಂಡ ದಾವಾ ಆಸ್ತಿಯಲ್ಲಿ ಸ್ವಾಧೀನಾನುಭವದಲ್ಲಿ ಇರಲಿಲ್ಲ ಎಂದರೆ ಸರಿಯಲ್ಲ. ವಾದಿಗೆ ದಾವಾ ಆಸ್ತಿಯಲ್ಲಿ, ದಾವಣಗೆರೆ ನ್ಯಾಯಾಲಯದಲ್ಲಿರುವ ಆಸ್ತಿ ಮತ್ತು 1 ನೇ ಪ್ರತಿವಾದಿಯ ಹೆಸರಿನಲ್ಲಿ ಗೋಪಗೊಂಡನಹಳ್ಳಿ ಗ್ರಾಮದಲ್ಲಿರುವ

ಕೆಂಪು ಹಂಚಿನ ಮನೆಗೂ ಸಹ ಸಮಾನವಾದ ಭಾಗಾಂಶದ ಹಕ್ಕು ಮತ್ತು ಹಿತಾಸಕ್ತಿ ಇದೆ ಎಂದರೆ ಸರಿಯಲ್ಲ.

ಮರು ವಿಚಾರಣೆ:- ಇಲ್ಲ

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.